# ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾದಂ.ನ್ಯಾಯಾಲಯ, ಶಹಾಪೂರ.

ಸಿ.ಡಬ್ಲ್ಯೂ3 ಪಿ.ಡಬ್ಲ್ಯೂ1

ಸಿ.ಸಿ. ನಂ. 851/2025

| | | |
|---|---|---|
| ಹೆಸರು | ಃ | ಮಲ್ಲಿಕಾರ್ಜುನ |
| ತಂದೆ ಹೆಸರು | ಃ | ನಿಂಗಪ್ಪ |
| ವಯಸ್ಸು | ಃ | 35 ವರ್ಷ |
| ಉದ್ಯೋಗ | ಃ | ಕೂಲಿ |
| ವಾಸ | ಃ | ಶಖಾಪೂರ |

ದಿನಾಂಕ **23.02.2026**
ಸಾಕ್ಷಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.
ಮುಖ್ಯ ವಿಚಾರಣೆ ಃ ಸಹಾಯಕ ಸರಕಾರಿ ಅಭಿಯೋಜಕರವರಿಂದಃ

ನನಗೆ ಚಾಸಾ2 ಹಾಗೂ ಆರೋಪಿಯ ಪರಿಚಯ ಇರುವುದಿಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಜಪ್ತಿ ಪಂಚನಾಮೆಯನ್ನು ಮಾಡಿರುವುದಿಲ್ಲ ಹಾಗೂ ಯಾವುದೇ ಮದ್ಯದ ಪೌಚಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಸಾಕ್ಷಿ ಜಪ್ತಿ ಪಂಚನಾಮೆಯಾಗಿದ್ದು ಅದನ್ನು ಈಗ ನಿಪಿ.1 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾದವು.

**(ಈ ಹಂತದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದರು. ಅನುಮತಿ ಕೊಟ್ಟಿದೆ)**

**ಪಾಟೀ ಸವಾಲುಃ ಸ.ಸ.ಅ. ರವರಿಂದಃ**

ದಿನಾಂಕಃ 05-07-2025 ರಂದು ರಂದು ಪೋಲಿಸರು ರಾತ್ರಿ 8.00 ರಿಂದ 9 ರವರ ಸಮಯದಲ್ಲಿ ಶಿರವಾಳ ಗ್ರಾಮದ ಒಂದು ಕಿರಾಣಿ ಅಂಡಿಯ ಮುಂದೆ ನನ್ನ ಹಾಗೂ ಚಾಸಾ2 ರವರ ಸಮಕ್ಷಮ ನಿಪಿ.1 ರಂತೆ ಪಂಚನಾಮೆಯನ್ನು ಮಾಡಿ ಆರೋಪಿಯಿಂದ 32 OC ವಿಸ್ಕಿಯ ಪೌಚಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಆರೋಪಿತನೊಂದಿಗೆ ರಾಜಿ ಆಗಿರುತ್ತೇನೆ ಎಂದರೆ ಸರಿ. ನನಗೆ ನಿಪಿ.1 ರ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟಿ ಸವಾಲು ಆರೋಪಿಯ ಪರ ಮಾನ್ಯ ವಕೀಲರಿಂದ ಇಲ್ಲ ಎಂದು ಹೇಳಿರುತ್ತಾರೆ.</u>**

**<u>ಮರುವಿಚಾರಣೆ ಇಲ್ಲ.</u>**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು,
ಶಹಾಪೂರ.